ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೯೪ (೨೨೪೭)

ಸದಸ್ಯರ ಹೆಸರು ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ)

ಉತ್ತರಿಸುವ ಸಚಿವರು ಶ್ರೀ ಬಂಡೆಪ್ಪ ಖಾಶೆಂಪೂರ (ಕೃಷಿ ಸಚಿವರು)

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೃಷಿ ಇಲಾಖೆಯಲ್ಲಿ ಸಿಬ್ಬಂದಿಯ ಕೊರತೆಯಿಂದಾಗಿ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಹೌದು
ಆ)	ಹಾಗಿದ್ದಲ್ಲಿ, ಅಗತ್ಯವಿರುವ ಸಿಬ್ಬಂದಿಯನ್ನು ತುಂಬಲು ಉದ್ದೇಶಿಸಲಾಗಿದೆಯೇ?	ಹೌದು
ಇ)	ಹಾಗಿದ್ದಲ್ಲಿ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ?	ಹೌದು, ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೯೫ (೧೯೪೩)

ಸದಸ್ಯರ ಹೆಸರು ಡಾ ಸುಧಾಕರ್ ಎಂ ಸಿ (ಚಿಂತಾಮಣಿ)

ಉತ್ತರಿಸುವ ಸಚಿವರು ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಹಾಗೂ ಮುಜರಾಯಿ ಸಚಿವರು)

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಚಿಂತಾಮಣಿ ನಗರದ ಸಹನೇಶ್ವರ ದೇವಾಲಯದ ಆವರಣದಲ್ಲಿ ಅಕ್ರಮವಾಗಿ ಮನೆಗಳನ್ನು ಕಟ್ಟಿಕೊಂಡು ವಾಸವಿರುವುದು	ಚಿಂತಾಮಣಿ ನಗರದ ಸಹನೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಅಕ್ರಮವಾಗಿ ಮನೆಗಳನ್ನು ಕಟ್ಟಿರುವುದಿಲ್ಲ ಆದರೆ ಈ ದೇವಾಲಯದ ಆವರಣದಲ್ಲಿ ದೇವಾಲಯದ

	ಸರ್ಕಾರದ ಗಮನಕ್ಕೆ ಬಂದಿದೆಯೇ?	ವತಿಯಿಂದ ೧೯ ಅಂಗಡಿಗಳು ಹಾಗೂ ೪ ಮನೆಗಳು ನಿರ್ಮಿಸಿದ್ದು, ೧೯ ಅಂಗಡಿಗಳು ಮತ್ತು ೨ ಮನೆಗಳನ್ನು ಗುತ್ತಿಗೆಗೆ ನೀಡಲಾಗಿರುತ್ತದೆ ಉಳಿದ ೨ ಮನೆಗಳನ್ನು ದೇವಾಲಯದ ಅರ್ಚಕರ ವಾಸ್ತವ್ಯಕ್ಕಾಗಿ ಉಚಿತವಾಗಿ ನೀಡಲಾಗಿರುತ್ತದೆ
ಆ)	ಬಂದಿದ್ದಲ್ಲಿ ಇವುಗಳನ್ನು ತೆರವುಗೊಳಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳವುದೇ?	ಪ್ರಶ್ನೆ ಉದ್ಭವಿರುವುದಿಲ್ಲ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೯೬ (೧೯೪೪)

ಸದಸ್ಯರ ಹೆಸರು ಡಾ ಸುಧಾಕರ್ ಎಂ ಸಿ (ಚಿಂತಾಮಣಿ)

ಉತ್ತರಿಸುವ ಸಚಿವರು ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಹಾಗೂ ಮುಜರಾಯಿ ಸಚಿವರು)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಚಿಂತಾಮಣಿ ನಗರದ ಸಹನೇಶ್ವರ ದೇವಸ್ಥಾನ ಹಾಗೂ ದಾದಾರಾವ್ ಛತ್ರದ ಜಮೀನಿನಲ್ಲಿ ಮುಜರಾಯಿ ಇಲಾಖೆಗೆ ಸೇರಿರುವ ಅಂಗಡಿ ಮಳಿಗೆಗಳು ಕೇಂದ್ರ ಸ್ಥಳದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ